# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1550(1830) |
| ಮಾನ್ಯ ಸದಸ್ಯರ ಹೆಸರು | ಡಾ: ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 23.03.2026 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಕಳೆದ 03 ವರ್ಷಗಳಲ್ಲಿ ಸಂಭವಿಸಿದ ಹಾವು ಕಡಿತ ಪ್ರಕರಣಗಳು ಎಷ್ಟು; ಇದೇ ಅವಧಿಯಲ್ಲಿ ಹಾವು ಕಡಿತದಿಂದ ಮೃತಪಟ್ಟವರ ಸಂಖ್ಯೆ ಎಷ್ಟು; (ವರ್ಷವಾರು ವಿವರ ನೀಡುವುದು )</td><td>ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಸಂಭವಿಸಿದ ಹಾವು ಕಡಿತ ಪ್ರಕರಣಗಳು ಹಾಗೂ ಹಾವು ಕಡಿತದಿಂದ ಮೃತಪಟ್ಟವರ ಸಂಖ್ಯೆಯು ವರದಿ ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ಹಾವು ಕಡಿತ ಪ್ರಕರಣಗಳು</th><th>ಹಾವು ಕಡಿತದಿಂದ ಮೃತಪಟ್ಟವರ ಸಂಖ್ಯೆ</th></tr>
<tr><td>2023</td><td>6596</td><td>19</td></tr>
<tr><td>2024</td><td>13235</td><td>100</td></tr>
<tr><td>2025</td><td>16805</td><td>154</td></tr>
</table>
</td></tr>
<tr><td>ಆ</td><td>ವರ್ಷದಿಂದ ವರ್ಷಕ್ಕೆ ಹಾವು ಕಡಿತ ಪ್ರಕರಣಗಳು ಹಾಗೂ ಕಡಿತದಿಂದ ಮೃತಪಡುವವರ ಸಂಖ್ಯೆಯು ಹೆಚ್ಚಳವಾಗುತ್ತಿರುವುದಕ್ಕೆ ಕಾರಣಗಳೇನು; (ವಿವರಗಳನ್ನು ನೀಡುವುದು)</td><td>ಹಾವು ಕಡಿತ ಪ್ರಕರಣಗಳು ಹಾಗೂ ಮೃತಪಡುವವರ ಸಂಖ್ಯೆಯು ವರದಿ ಪ್ರಮಾಣವು ಏರಿಕೆಯಾಗಿರುತ್ತದೆ. WHO ಮಾಹಿತಿ ಪ್ರಕಾರ ಪ್ರತಿ ವರ್ಷ ಭಾರತ ದೇಶದಲ್ಲಿ ಸುಮಾರು 3 ರಿಂದ 4 ಮಿಲಿಯನ್ ರಷ್ಟು ಹಾವು ಕಡಿತ ಪ್ರಕರಣಗಳು ಹಾಗೂ 50,000 ಮರಣಗಳು ಸಂಭವಿಸುತ್ತಿವೆ. ಆದರೆ ಇವುಗಳಲ್ಲಿ ಹೆಚ್ಚಿನ ಪ್ರಮಾಣವು ವರದಿಯಾಗಿರುತ್ತಿರುವುದಿಲ್ಲ.<br>ಹಾವು ಹಾಗೂ ತಡೆಗಟ್ಟುವಿಕೆ ನಿಯಂತ್ರಣ ಕಾರ್ಯಕ್ರಮವು 2022 ರಲ್ಲಿ ಮಾತ್ರವೇ ಅನುಷ್ಠಾನಗೊಂಡಿದ್ದು ಕಾರ್ಯಕ್ರಮದ ಪ್ರಗತಿ ಹಾಗೂ ನಿಖರ ವರದಿಯನ್ನು ಪಡೆಯಲು ರಾಜ್ಯವು ದೇಶದಲ್ಲಿಯೇ ಪ್ರಪ್ರಥಮ ಭಾರಿಗೆ ಹಾವು ಕಡಿತ ಪ್ರಕರಣಗಳನ್ನು ಹಾಗೂ ಹಾವು ಕಡಿತದಿಂದ ಸಂಭವಿಸುವ ಮರಣಗಳನ್ನು ದಿನಾಂಕ 12.02.2024 ರಂದು "ಘೋಷಿತ ಖಾಯಿಲೆ" ಎಂದು ಘೋಷಿಸಿ ಆದೇಶ ಹೊರಡಿಸಿರುವುದರಿಂದ, ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳು, ಖಾಸಗಿ ಆಸ್ಪತ್ರೆಗಳು ಹಾಗೂ ವೈದ್ಯಕೀಯ ಕಾಲೇಜುಗಳು ಕಡ್ಡಾಯವಾಗಿ ಭಾರತ ಸರ್ಕಾರದ Integrated Health Information Platform (IHIP) ನಲ್ಲಿ ವರದಿ ಮಾಡುತ್ತಿರುತ್ತವೆ.<br><br>ರಾಜ್ಯದಲ್ಲಿ ಹಾವು ಕಡಿತ ತಡೆಗಟ್ಟುವಿಕೆ ಕಾರ್ಯಕ್ರಮವು ಹಾಗೂ ನಿಯಂತ್ರಣ ಸಮರ್ಪಕವಾಗಿ ಅನುಷ್ಠಾನಗೊಂಡಿರುವುದರಿಂದ ಸಾರ್ವಜನಿಕರಲ್ಲಿ ಹಾವು ಕಡಿತದ ಬಗ್ಗೆ ಅರಿವು ಮೂಡಿ, ಹೆಚ್ಚಿನ ಪ್ರಮಾಣದಲ್ಲಿ ಚಿಕಿತ್ಸೆಗಾಗಿ ಆಸ್ಪತ್ರೆಗೆ ವರದಿ ಮಾಡಿಕೊಂಡಿರುತ್ತಾರೆ.<br><br>ಈ ಹಿಂದೆ ಹಾವು ಕಡಿತ ಪ್ರಕರಣಗಳು ಹಾಗೂ ಮರಣಗಳ ವರದಿಯನ್ನು ದಾಖಲಿಸುವ ವ್ಯವಸ್ಥಿತವಾದ ಕ್ರಮವು ಇಲ್ಲದೇ ಇದ್ದುದರಿಂದ ತದನಂತರ ಹಾವು ಕಡಿತ ಪ್ರಕರಣಗಳು ಹಾಗೂ ಮರಣಗಳ ವರದಿಯನ್ನು ಕಡ್ಡಾಯವಾಗಿ ರಾಜ್ಯದಲ್ಲಿ ದಿನಾಂಕ 12.02.2024ರಿಂದ ಭಾರತ ಸರ್ಕಾರದ Integrated Health Information Platform (IHIP) ನಲ್ಲಿ ವರದಿ ಮಾಡಲು ಸೂಚನೆ ಇರುವುದರಿಂದ ದಾಖಲಾಗಿರುವ ಪ್ರಕರಣಗಳು ಬೆಳಕಿಗೆ ಬರುತ್ತಿರುವುದರಿಂದ ಅಂಕಿ-ಅಂಶಗಳ ವರದಿಯ ಆಧಾರದ ಮೇಲೆ ಪ್ರಮಾಣವು ಏರಿಕೆಯಾಗಿರುವುದು ಕಂಡುಬರುತ್ತದೆಯೇ ಹೊರತು ನೈಜ ಪ್ರಕರಣಗಳಲ್ಲಿ ಏರಿಕೆಯಾಗಿರುವುದಿಲ್ಲ.</td></tr>
<tr><td>ಇ</td><td>ಹಾವು ಕಡಿತದಿಂದ ಮೃತಪಡುವವರ</td><td>ಹಾವು ಕಡಿತದಿಂದ ಮೃತಪಡುವವರ ಸಂಖ್ಯೆಯನ್ನು ಗಣನೀಯವಾಗಿ ಇಳಿಸುವ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು:</td></tr>
</table>

| | | |
|---|---|---|
| | ಸಂಖ್ಯೆಯನ್ನು ಗಣನೀಯವಾಗಿ ಇಳಿಸುವ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು) | • ಕರ್ನಾಟಕ ರಾಜ್ಯವು ಈಗಾಗಲೇ ಎಲ್ಲಾ ಹಾವು ಕಡಿತ ಪ್ರಕರಣಗಳು ಮತ್ತು ಮರಣಗಳನ್ನು 2024 ರಲ್ಲಿ 'ಘೋಷಿತ ಖಾಯಿಲೆ' ಎಂದು ದೇಶದಲ್ಲೇ ಪ್ರಪ್ರಥಮ ಭಾರಿಗೆ ಘೋಷಿಸಿದೆ.<br>• ಎಲ್ಲಾ ಹಾವು ಕಡಿತ ಪ್ರಕರಣಗಳು ಹಾಗೂ ಮರಣಗಳನ್ನು ವರದಿ ಮಾಡುವುದು ಕಡ್ಡಾಯಗೊಳಿಸಲಾಗಿದೆ.<br>• ರಾಜ್ಯದಲ್ಲಿ ಈಗಾಗಲೇ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ ಹಾಗೂ ಜಿಲ್ಲಾಸ್ಪತ್ರೆಗಳಲ್ಲಿ Anti Snake Venom (ASV) ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತಿದೆ.<br>• ರಾಜ್ಯದ ಎಲ್ಲಾ ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳನ್ನು 'ಹಾವು ಕಡಿತ ಚಿಕಿತ್ಸಾ ಕೇಂದ್ರಗಳಾಗಿ ಗುರುತಿಸಲಾಗಿದ್ದು, ಈ ಆಸ್ಪತ್ರೆಗಳಲ್ಲಿ ದಿನದ 24 ಗಂಟೆಯು ಹಾವು ಕಡಿತಕ್ಕೆ ಚಿಕಿತ್ಸೆ ಹಾಗೂ ಕಡಿತದಿಂದ ಉಂಟಾಗುವ ಬೇರೆ ಬೇರೆ ತೊಂದರೆಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ.<br>• ವೈದ್ಯಾಧಿಕಾರಿಗಳು ಹಾಗೂ ಇತರೇ ಆರೋಗ್ಯ ಸಿಬ್ಬಂದಿಗಳಿಗೆ ವಿವಿಧ ಹಂತಗಳಲ್ಲಿ ಹಾವು ಕಡಿತ ಚಿಕಿತ್ಸೆಯ ಬಗ್ಗೆ ತರಬೇತಿಯನ್ನು ನೀಡಲಾಗಿದೆ.<br>• ಸಮುದಾಯದಲ್ಲಿ ಹಾವು ಕಡಿತ ನಿಯಂತ್ರಣ ಹಾಗೂ ತಡೆಗಟ್ಟುವಿಕೆಯ ಬಗ್ಗೆ ಅರಿವು ಮೂಡಿಸಲು ಹಾಗೂ ಹಾವು ಕಚ್ಚಿದ ತಕ್ಷಣ ಆಸ್ಪತ್ರೆಗೆ ಭೇಟಿ ನೀಡಲು ವಿವಿಧ ಇಲಾಖೆಗಳ ಸಹಯೋಗದೊಂದಿಗೆ IEC ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.<br>• ಹಾವು ಕಡಿತ ಮರಣಗಳಿಗೆ ಕಾರಣಗಳನ್ನು ತಿಳಿದು, ಮರಣಗಳನ್ನು ತಗ್ಗಿಸಲು ಎಲ್ಲಾ ಹಾವು ಕಡಿತದ ಮರಣ ಪ್ರಕರಣಗಳನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ Death Audit ನಡೆಸಲಾಗುತ್ತಿದೆ.<br>• ಸಾಂಪ್ರದಾಯಿಕ/ನಾಟಿ ಚಿಕಿತ್ಸಕರಿಂದ ಹಾವು ಕಡಿತ ಪ್ರಕರಣಗಳು ಆಸ್ಪತ್ರೆ ಸೇರುವುದು ತಡವಾದಲ್ಲಿ ಅಥವಾ ಮರಣ ಹೊಂದಿದಲ್ಲಿ ಅವರ ಮೇಲೆ KPME Act ಅಡಿಯಲ್ಲಿ ಜಿಲ್ಲಾ ಮಟ್ಟದಲ್ಲಿ ಕ್ರಮ ವಹಿಸಲು ಸೂಚಿಸಲಾಗಿದೆ.<br>• ಖಾಸಗಿ ಆಸ್ಪತ್ರೆಗಳಲ್ಲಿ ಮುಂಗಡ ಹಣಕ್ಕಾಗಿ ಒತ್ತಾಯಿಸದೆ ಹಾವು ಕಡಿತಗೊಂಡ ಸಂತ್ರಸ್ತರಿಗೆ ತಕ್ಷಣ ಜೀವ ಉಳಿಸುವ ಚಿಕಿತ್ಸೆಯನ್ನು ಒದಗಿಸುವಂತೆ ಆದೇಶಿಸಲಾಗಿದೆ.<br>• ಹಾವು ಕಡಿತ ಮತ್ತು ಮರಣಗಳನ್ನು ತಡೆಗಟ್ಟಲು ದೇಶದಲ್ಲೇ ಪ್ರಪ್ರಥಮ ಭಾರಿಗೆ ರಾಜ್ಯವು ವಿವಿಧ ಇಲಾಖೆಗಳು ತೆಗೆದುಕೊಳ್ಳಬೇಕಾಗಿರುವ ಕ್ರಮಗಳ ಕುರಿತು ರಾಜ್ಯ ಕ್ರಿಯಾ ಯೋಜನೆಗೆ ದಿನಾಂಕ 27.02.2026 ರಂದು ಚಾಲನೆ ನೀಡಿ ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತಿದೆ. |

**ಆಕುಕ 62 ಎಸ್‌ಎಂಎಂ 2026**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಸಚಿವರು**